# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 307 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಮಂತ್ರಿಗಳು |
| ಉತ್ತರಿಸಬೇಕಾದ ದಿನಾಂಕ | 12-07-2018 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ವಿಶ್ವವಿದ್ಯಾಲಯ ವ್ಯಾಪ್ತಿಯ ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿ ಸ್ನಾತಕೋತ್ತರ ಕೇಂದ್ರ ಪ್ರಾರಂಭವಾಗಿ ಎಷ್ಟು ವರ್ಷವಾಗಿದೆ; ಈ ಕೇಂದ್ರಕ್ಕೆ ಸರ್ಕಾರದಿಂದ ಎಷ್ಟು ಜಮೀನು ಮಂಜೂರಾಗಿದೆ; | ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿಯಲ್ಲಿ ಗುಲ್ಬರ್ಗ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು 1996-97ನೇ ವರ್ಷದಿಂದ ಪ್ರಾರಂಭಿಸಲಾಗಿದ್ದು, ಪ್ರಸ್ತುತ, ಸದರಿ ಕೇಂದ್ರ ಆರಂಭವಾಗಿ 20 ವರ್ಷಗಳಾಗಿವೆ.<br>ಮುಂದುವರೆದು, 310 ಎಕರೆ ಸರ್ಕಾರಿ ಜಮೀನು ಮತ್ತು 12 ಎಕರೆ ಖಾಸಗಿ ಜಮೀನನ್ನು ಒಳಗೊಂಡು ಒಟ್ಟು 322 ಎಕರೆ ಜಮೀನನ್ನು ಹಾಲಹಳ್ಳಿ ಸ್ನಾತಕೋತ್ತರ ಕೇಂದ್ರಕ್ಕೆ ಮಂಜೂರು ಮಾಡಲಾಗಿದೆ. |
| ಆ) | ಈ ಕೇಂದ್ರಕ್ಕೆ ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಈ ವಿಶ್ವವಿದ್ಯಾಲಯದಲ್ಲಿ ಯಾವ ಯಾವ ಸ್ನಾತಕೋತ್ತರ ವಿಷಯಗಳನ್ನು ಬೋಧಿಸಲಾಗುತ್ತಿದೆ; (ವಿವರ ನೀಡುವುದು) | ಹಾಲಹಳ್ಳಿ ಸ್ನಾತಕೋತ್ತರ ಕೇಂದ್ರಕ್ಕೆ ಸರ್ಕಾರದಿಂದ ನೇರವಾಗಿ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಮುಂದುವರಿದು, ಸದರಿ ಕೇಂದ್ರದಲ್ಲಿರುವ ಸ್ನಾತಕೋತ್ತರ ಕೋರ್ಸುಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ. |
| ಇ) | ಈ ಸ್ನಾತಕೋತ್ತರ ಕೇಂದ್ರವು ವಿಶ್ವವಿದ್ಯಾಲಯ ಹಾಗೂ ಸರ್ಕಾರದಿಂದ ಸಂಪೂರ್ಣ ನಿರ್ಲಕ್ಷಕ್ಕೊಳಗಾಗಿ ಮೂಲ ಸೌಕರ್ಯ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಈ) | ಬಂದಿದ್ದಲ್ಲಿ, ಮೂಲ ಸೌಕರ್ಯ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಮುಕ್ತಿಗೊಳಿಸಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳುವುದೇ? | ಗುಲ್ಬರ್ಗ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಬಿಡುಗಡೆ ಮಾಡಲಾಗುವ ಅಭಿವೃದ್ಧಿ ಅನುದಾನ, ವೇತನಾನುದಾನ, ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಗಳಲ್ಲಿ ಪ್ರತಿ ಶತ 10ರಿಂದ 15ರಷ್ಟು ಅನುದಾನವನ್ನು ಸದರಿ ಸ್ನಾತಕೋತ್ತರ ಕೇಂದ್ರದ ಅಭಿವೃದ್ಧಿಗಾಗಿ ಉಪಯೋಗಿಸಲಾಗುತ್ತಿದೆ ಹಾಗೂ ಸದರಿ ಸ್ನಾತಕೋತ್ತರ ಕೇಂದ್ರದ ಅಭಿವೃದ್ಧಿಗಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಗುಲ್ಬರ್ಗ ವಿಶ್ವವಿದ್ಯಾಲಯದಿಂದ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br>ಮುಂದುವರೆದು, ಪ್ರಸ್ತುತ, ಬೋಧಕ ಸಿಬ್ಬಂದಿಗಳ ನೇಮಕಾತಿ ಸಂಬಂಧ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಅಧಿಸೂಚನೆ ಹೊರಡಿಸಲಾಗಿದೆ. |

ಸಂಖ್ಯೆ: ಇಡಿ 242 ಯುಎನ್ಇ 2018

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು.

— ಅನುಬಂಧ :—

ಅನುಬಂಧ

## ಗುಲಬರ್ಗಾ ವಿಶ್ವವಿದ್ಯಾಲಯದ ಬೀದರ ಸ್ನಾತಕೋತ್ತರ ಕೇಂದ್ರದಲ್ಲಿ ಬೋಧಿಸುತ್ತಿರುವ ಸ್ನಾತಕೋತ್ತರ ಪದವಿ ಕೋರ್ಸುಗಳು

| ಕ್ರ.ಸಂ. | ಸ್ನಾತಕೋತ್ತರ ಪದವಿ ಕೋರ್ಸುಗಳ ಹೆಸರುಗಳು | ಪ್ರಾರಂಭವಾದ ವರ್ಷ | ಷರಾ |
|---|---|---|---|
| 1. | ಸಕ್ಕರೆ ತಂತ್ರಜ್ಞಾನ | 1996–97 | ಕಳೆದ ಕೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳು ಲಭ್ಯವಿರುವುದಿಲ್ಲ |
| 2. | ಉರ್ದು ಮತ್ತು ಪರ್ಷಿಯನ್ | 1998–99 | -- |
| 3. | ರಾಜ್ಯಶಾಸ್ತ್ರ | 2007–08 | -- |
| 4. | ಸಮಾಜಕಾರ್ಯ | 2008–08 | -- |
| 5. | ಗಣಿತ ಶಾಸ್ತ್ರ | 2009–10 | -- |
| 6. | ಸಾವಯವ ರಸಾಯನ ಶಾಸ್ತ್ರ | 2009–10 | -- |
| 7. | ಇಂಗ್ಲೀಷ | 2010–11 | -- |
| 8. | ವಾಣಿಜ್ಯ ಶಾಸ್ತ್ರ | 2010–11 | -- |
| 9. | ಮಹಿಳಾ ಅಧ್ಯಯನ | 2011–12 | -- |
| 10. | ಅರ್ಥ ಶಾಸ್ತ್ರ | 2011–12 | -- |
| 11. | ಸಮಾಜ ಶಾಸ್ತ್ರ | 2011–12 | -- |
| 12. | ಕನ್ನಡ | 2011–12 | -- |
| 13. | ಗಣಕ ವಿಜ್ಞಾನ | 2017–18 | ವಿದ್ಯಾರ್ಥಿಗಳು ಲಭ್ಯವಿರುವುದಿಲ್ಲ |

ಕುಲಸಚಿವರು
ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ